## ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 358 |
| 2.. | ಸದಸ್ಯರ ಹೆಸರು | : | ಶ್ರೀ ಕೆ. ಗೋವಿಂದರಾಜ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| 3. | ಉತ್ತರಿಸುವ ದಿನಾಂಕ | : | 10-12-2020 |
| 4. | ಉತ್ತರಿಸುವವರು | : | ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೆಂಗಳೂರು ನಗರದ ಯಶವಂತಪುರ ರೈಲ್ವೆ ನಿಲ್ದಾಣಕ್ಕೆ ಬರುವ ಮತ್ತು ಇಲ್ಲಿಂದ ಪ್ರಯಾಣಿಸುವ ಪ್ರಯಾಣಿಕರ ಅಂದಾಜು ಸರ್ಕಾರಕ್ಕಿದೆಯೇ; (ವಿವರ ಒದಗಿಸುವುದು) | ರೈಲ್ವೆ ಇಲಾಖೆಯ ಮಾಹಿತಿಯನ್ವಯ ಪ್ರತಿನಿತ್ಯ ಸುಮಾರು ಒಂದು ಲಕ್ಷ ಪ್ರಯಾಣಿಕರು / ಸಂದರ್ಶಕರು ಬೆಂಗಳೂರು ನಗರದ ಯಶವಂತಪುರ ರೈಲ್ವೆ ನಿಲ್ದಾಣದಿಂದ ಬರುವ ಮತ್ತು ಇಲ್ಲಿಂದ ಪ್ರಯಾಣಿಸುವ ಅಂದಾಜು ಸರ್ಕಾರಕ್ಕೆ ಇರುತ್ತದೆ. |
| ಆ | ಯಶವಂತಪುರ ರೈಲ್ವೆ ನಿಲ್ದಾಣ ತಲುಪಲು ಮತ್ತು ನಿಲ್ದಾಣದಿಂದ ನಗರದ ಇತರೆಡೆಗೆ ಸಾಗಲು ಇರುವ ಮಾರ್ಗಗಳು ಕಿರಿದಾಗಿದ್ದು, ಬೀದಿ ಬೀದಿ ವ್ಯಾಪಾರಿಗಳು, ಅಂಗಡಿಗಳು, ರಸ್ತೆಯನ್ನು ಆಕ್ರಮಿಸಿಕೊಂಡಿರುವ ಅಂಶವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ ದೆಯೇ; ಹಾಗಿದ್ದಲ್ಲಿ, ಸುಗಮ ವಾಹನ ಸಂಚಾರಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು; | ಯಶವಂತಪುರ ರೈಲ್ವೆ ನಿಲ್ದಾಣ ತಲುಪಲು ಮತ್ತು ನಿಲ್ದಾಣದಿಂದ ನಗರದ ಇತರೆಡೆಗೆ ಸಾಗಲು 1) ತುಮಕೂರು ಮುಖ್ಯರಸ್ತೆ ಮತ್ತು 2) ಯಶವಂತಪುರ ಮಾರುಕಟ್ಟೆ ರಸ್ತೆ ಎಂಬ ಎರಡು ರಸ್ತೆಗಳಿರುತ್ತವೆ.<br><br>ಯಶವಂತಪುರ ಮಾರುಕಟ್ಟೆ ರಸ್ತೆಯಲ್ಲಿ ಬೀದಿ ಬದಿ ವ್ಯಾಪಾರಿಗಳು, ಅಂಗಡಿಗಳು, ರಸ್ತೆಯನ್ನು ಆಕ್ರಮಿಸಿಕೊಂಡಿರುವ ಅಂಶವನ್ನು ಪಾಲಿಕೆಯು ಪರಿಗಣಿಸಿ, ಆಗಿಂದ್ದಾಗೆ ಪಶ್ಚಿಮ ವಲಯ ವತಿಯಿಂದ ತಾತ್ಕಾಲಿಕ ಒತ್ತುವರಿಗಳನ್ನು ತೆರೆವುಗೊಳಿಸಿ ಪ್ರಯಾಣಿಕರ ಸಂಚಾರಕ್ಕೆ ಅನುವು ಮಾಡಿಕೊಡಲಾಗುತ್ತಿರುತ್ತದೆ.<br><br>ಇದಲ್ಲದೆ ತುಮಕೂರು ಮುಖ್ಯರಸ್ತೆಯಲ್ಲಿ ಪ್ರಯಾಣಿಕರು ಮತ್ತು ಪಾದಚಾರಿಗಳು ಸುಗಮವಾಗಿ ರಸ್ತೆ ದಾಟಲು ಅನುಕೂಲವಾಗುವಂತೆ ಲಿಫ್ಟ್ ಒಳಗೊಂಡ ಪಾದಚಾರಿ ಮೇಲ್ಸೇತುವೆಯನ್ನು ಪಾಲಿಕೆ ವತಿಯಿಂದ ನಿರ್ಮಿಸಲಾಗಿದೆ. |
| ಇ | ಯಶವಂತಪುರ ರೈಲ್ವೆ ನಿಲ್ದಾಣವನ್ನು ಮೇಲ್ದರ್ಜೆಗೇರಿಸಲು ಮತ್ತು ರಸ್ತೆಗಳ ಅಭಿವೃದ್ಧಿಗಾಗಿ ಈಗಾಗಲೇ ಕೇಂದ್ರ ಸರ್ಕಾರ ಅನುದಾನ ಒದಗಿಸಿರುವುದು ನಿಜವೇ; ಹಾಗಿದ್ದಲ್ಲಿ, ಈ ಅಭಿವೃದ್ಧಿ ಕುರಿತು ಆಗಿರುವ ಪ್ರಗತಿ ಏನು (ವಿವರ ಒದಗಿಸುವುದು) | ಕೇಂದ್ರ ಸರ್ಕಾರದಿಂದ ಯಶವಂತಪುರ ರೈಲ್ವೆ ನಿಲ್ದಾಣಕ್ಕೆ ಸಂಪರ್ಕಿಸುವ ರಸ್ತೆಗಳ ಅಭಿವೃದ್ಧಿಗೆ ನಿರ್ಧಿಷ್ಟವಾಗಿ ಯಾವುದೇ ಅನುದಾನ ಒದಗಿಸಿರುವುದಿಲ್ಲ. |

| | | |
|---|---|---|
| ಈ | ಯಶವಂತಪುರ ರೈಲ್ವೆ ನಿಲ್ದಾಣ ತಲುಪಲು ಇರುವ ನ್ಯೂನ್ಯತೆ ಸರಿಪಡಿಸುವ ನಿಟ್ಟಿನಲ್ಲಿ ಸರ್ಕಾರ ವಿಶೇಷ ಯೋಜನೆ ರೂಪಿಸಿದೆಯೇ; ಹಾಗಿದ್ದಲ್ಲಿ, ವಿವರ ಒದಗಿಸುವುದು? | ಕರ್ನಾಟಕ ಸರ್ಕಾರದ ಅನುದಾನದಲ್ಲಿ ತುಮಕೂರು ಮುಖ್ಯ ರಸ್ತೆಯನ್ನು ವೈಟ್ ಟಾಪಿಂಗ್ ರಸ್ತೆಯಾಗಿ ಅಭಿವೃದ್ಧಿಪಡಿಸಲು ಅನುಮೋದನೆಯಾಗಿದ್ದು, ಕಾಮಗಾರಿಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಪ್ರಸ್ತುತ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ. |

**ಸಂಖ್ಯೆ: ನಅಇ 248 ಎಂಎನ್‌ವೈ 2020**

(ಬಿ.ಎಸ್. ಯಡಿಯೂರಪ್ಪ)
ಮುಖ್ಯಮಂತ್ರಿ